ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE 3/12/20

# 1998ರ ಕೆಎಎಸ್ ಅಧಿಕಾರಿಗಳ ನೇಮಕ ಅಕ್ರಮ ಲೋಪ ಸರಿಪಡಿಸದಿದ್ದರೆ ನ್ಯಾಯಾಂಗ ನಿಂದನೆ

▪ ವಿಕ ಸುದ್ದಿಲೋಕ ಬೆಂಗಳೂರು

'1998ನೇ ಸಾಲಿನ ಕೆಎಎಸ್ ಅಧಿಕಾರಿಗಳ ನೇಮಕ ಸಂಬಂಧ ನ್ಯಾಯಾಲಯ 2016ರಲ್ಲಿ ನೀಡಿದ್ದ ಆದೇಶ ಪಾಲನೆಯಲ್ಲಾಗಿರುವ ಲೋಪ ಸರಿಪಡಿಸಬೇಕು ಇಲ್ಲವೇ ನ್ಯಾಯಾಂಗ ನಿಂದನೆ ಎದುರಿಸಲು ಸಜ್ಜಾಗಬೇಕು' ಎಂದು ಬುಧವಾರ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಹೈಕೋರ್ಟ್ ತಾಕೀತು ಮಾಡಿದೆ.

ಚನ್ನಪ್ಪ ಕೆ. ರೂಪಶ್ರೀ ಮತ್ತಿತರ ಅಭ್ಯರ್ಥಿಗಳು ಸಲ್ಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿ ಮನವಿ ಆಲಿಸಿದ ಹಿರಿಯ ನ್ಯಾ. ಅರವಿಂದ್ ಕುಮಾರ್ ನೇತೃತ್ವದ ವಿಭಾಗೀಯ ಪೀಠ, ಲೋಪ ಸರಿಪಡಿಸಲು ಶುಕ್ರವಾರದವರೆಗೆ ಸಮಯ ನೀಡಿ ವಿಚಾರಣೆಯನ್ನು ಅಂದು ಮಧ್ಯಾಹ್ನದವರೆಗೆ ಸಮಯಾವಕಾಶ ನೀಡಿದೆ. ನ್ಯಾಯಾಲಯದ ಆದೇಶದಂತೆ ಕೆಪಿಎಸ್ಸಿ ಕಾರ್ಯದರ್ಶಿ ಜಿ.ಸತ್ಯವತಿ ಖುದ್ದು ನ್ಯಾಯಾಲಯದ ಮುಂದೆ ಹಾಜರಿದ್ದರು.

ಆಯೋಗದ ಪರ ಹಿರಿಯ ವಕೀಲರು, "2016ರಲ್ಲಿ ವಿಭಾಗೀಯ ಪೀಠ ನೀಡಿದ್ದ ನಿರ್ದೇಶನದಲ್ಲೇ ಗೊಂದಲವಿತ್ತು, ಆ ಬಗ್ಗೆ ಸ್ಪಷ್ಟನೆ ಕೋರಿದರೂ ನ್ಯಾಯಾಲಯ ಮತ್ತೆ ವಿವರಣೆ ನೀಡಿಲ್ಲ. ನ್ಯಾಯಾಲಯದ ಆದೇಶದಂತೆ ಆಯೋಗ ಹೊಸದಾಗಿ 91 ಅಭ್ಯರ್ಥಿಗಳ ಉತ್ತರ ಪತ್ರಿಕೆಗಳನ್ನು ಪರಿಗಣಿಸಿ ಪರಿಷ್ಕೃತ ಆಯ್ಕೆ ಪಟ್ಟಿ ಪ್ರಕಟಿಸಿದೆ. ಇದರಲ್ಲಿ ತಪ್ಪೇನೂ ಇಲ್ಲ" ಎಂದು ಸಮರ್ಥಿಸಿಕೊಂಡರು.

ಅವರ ವಾದವನ್ನು ನ್ಯಾಯಾಲಯ ಒಪ್ಪಲಿಲ್ಲ, "ನ್ಯಾಯಾಲಯ ಹೇಳಿದ್ದು 91 ಉತ್ತರ ಪತ್ರಿಕೆಗಳನ್ನು. ಆದರೆ ಆಯೋಗ 91 ಅಭ್ಯರ್ಥಿಗಳ ಉತ್ತರ ಪತ್ರಿಕೆಗಳನ್ನು ಪರಿಗಣಿಸಿದೆ. ಆಯೋಗಕ್ಕೆ ಗೊಂದಲವಿದ್ದರೆ ಸ್ಪಷ್ಟನೆ ಪಡೆಯಬಹುದಿತ್ತು. ಆದರೆ, ನಿಮಗೆ ಹೇಗೆ ಬೇಕೋ ಹಾಗೆ ಅದನ್ನು ಅರ್ಥೈಸಿಕೊಂಡು ಜಾರಿಗೊಳಿಸಿದ್ದೀರಿ" ಎಂದು ಹೇಳಿತು.


ಅಲ್ಲದೆ, "ಈ ವಿಚಾರದಲ್ಲಿ ಆಯೋಗದ ಕಾರ್ಯದರ್ಶಿಯನ್ನು ಬಲಿಪಶು ಮಾಡಲಾಗುತ್ತಿದೆ" ಎಂದು ಅಭಿಪ್ರಾಯಪಟ್ಟಿತು.

ಅರ್ಜಿದಾರರ ಪರ ವಾದಿಸಿದ ವಕೀಲರು, "ಹಗರಣದ ಬಗ್ಗೆ ನ್ಯಾಯಾಲಯ 2016ರಲ್ಲಿ ತೀರ್ಪು ನೀಡಿದಾಗ 91 ಉತ್ತರ ಪತ್ರಿಕೆಗಳ ಮೌಲ್ಯಮಾಪನ ಅಂಕ ಆಧರಿಸಿ ಅರ್ಹ ಅಭ್ಯರ್ಥಿಗಳನ್ನು ಸೇವೆಗೆ ಸೇರಿಸಿಕೊಳ್ಳುವಂತೆ ಆದೇಶಿಸಿತ್ತು. ಆದರೆ ಕೆಪಿಎಸ್ಸಿ ಅದನ್ನು ತಪ್ಪಾಗಿ ಅರ್ಥೈಸಿ ಹೆಚ್ಚಿನ ಉತ್ತರ ಪತ್ರಿಕೆಗಳನ್ನು ಪರಿಗಣಿಸಿದೆ. ಆ ಮೂಲಕ ಉದ್ದೇಶ ಪೂರ್ವಕವಾಗಿ ನ್ಯಾಯಾಂಗ ನಿಂದನೆ ಎಸಗಿದೆ" ಎಂದು ಹೇಳಿದರು.

ನ್ಯಾಯಾಲಯದ ಆದೇಶದಂತೆ 76 ಅಭ್ಯರ್ಥಿಗಳಿಗೆ ಪ್ರಯೋಜನ ಕಲ್ಪಿಸಬೇಕಾಗಿತ್ತು. ಆದರೆ ಕೆಪಿಎಸ್‌ಸಿ 97 ಅಭ್ಯರ್ಥಿಗಳ 127 ಉತ್ತರ ಪತ್ರಿಕೆಗಳನ್ನು ಪರಿಗಣಿಸಿ ಕೆಲವರಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ.

## ಹಣ ಒದಗಿಸಲು ಆದೇಶ

ಸರಕಾರ ಜಿಲ್ಲಾ ವಿಪತ್ತು ನಿರ್ವಹಣಾ ನಿಧಿ ಮತ್ತು ಜಿಲ್ಲಾ ಪ್ರಕೋಪ ನಿಯಂತ್ರಣ ನಿಧಿಗಳನ್ನು ರಚನೆ ಮಾಡಿದರೆ ಸಾಲದು. ಆ ನಿಧಿಗಳಿಗೆ ಹಣ ಒದಗಿಸಬೇಕು ಎಂದು ಬುಧವಾರ ರಾಜ್ಯ ಸರಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ. ವಿಪತ್ತು ನಿರ್ವಹಣಾ ಕಾಯಿದೆ-2005 ಪರಿಣಾಮಕಾರಿ ಜಾರಿಗೆ ತುಮಕೂರು ಜಿಲ್ಲೆ ಗುಬ್ಬಿ ತಾಲೂಕಿನ ಬೇಳೂರಿನ ಎ.ಮಲ್ಲಿಕಾರ್ಜುನ ಸಲ್ಲಿಸಿದ್ದ ಪಿಐಎಲ್ ಸಿಜೆ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠದ ಮುಂದೆ ವಿಚಾರಣೆಗೆ ಬಂದಿತು. ಅರ್ಜಿದಾರರು, "ಎರಡು ಸಮಿತಿಗಳನ್ನು ರಚಿಸಿದರೂ ಯಾವುದೇ ಹಣ ನೀಡಿಲ್ಲ" ಎಂದರು.



# ಟಾಕಿಂಗ್ ಲ್ಯಾಪ್‌ಟಾಪ್ ನೀತಿಯ ಮಾಹಿತಿ ಕೊಡಿ

▪ ವಿಕ ಸುದ್ದಿಲೋಕ ಬೆಂಗಳೂರು

ದೃಷ್ಟಿಚೇತನ ವಿದ್ಯಾರ್ಥಿಗಳ ಕಲಿಕೆಗೆ ಅನುಕೂಲವಾಗುವಂತೆ 'ಟಾಕಿಂಗ್ ಲ್ಯಾಪ್‌ಟಾಪ್' ವಿತರಿಸುವ ಕುರಿತು ಇರುವ ನೀತಿ ಹಾಗೂ ಎರಡು ವರ್ಷಗಳಿಂದ ಬಾಕಿ ಇರುವ ಲ್ಯಾಪ್ ಟಾಪ್ ವಿತರಣೆ ಕುರಿತು ಜ.8ರೊಳಗೆ ಸಮಗ್ರ ಮಾಹಿತಿ ನೀಡುವಂತೆ ರಾಜ್ಯ ಸರಕಾರಕ್ಕೆ ಬುಧವಾರ ಹೈಕೋರ್ಟ್ ಆದೇಶ ನೀಡಿತು.

ವಕೀಲ ಎಸ್.ಉಮಾಪತಿ ಸಲ್ಲಿಸಿದ್ದ ಅರ್ಜಿ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ್ ನೇತೃತ್ವದ ನ್ಯಾಯಪೀಠದ ಮುಂದೆ ವಿಚಾರಣೆಗೆ ಬಂದಿತ್ತು.

ಸರಕಾರಿ ವಕೀಲರು, "ಸರಕಾರ ಟೆಂಡರ್ ಕರೆದು ಲ್ಯಾಪ್ ಟಾಪ್ ವಿತರಣೆಗೆ ಕ್ರಮ ಕೈಗೊಳ್ಳುತ್ತಿದ್ದು, ಎರಡು ವರ್ಷದ್ದನ್ನು ಒಟ್ಟಿಗೆ ವಿತರಿಸಲಾಗುವುದು" ಎಂದರು.

ಅದಕ್ಕೆ ಪೀಠ, "ಲ್ಯಾಪ್‌ಟಾಪ್‌ಗಳ ವಿತರಣೆಗೆ ಯಾವ ಯಾವ ನೀತಿಯನ್ನು ಸರಕಾರ ಪಾಲನೆ ಮಾಡುತ್ತಿದೆ. ಯಾವ ನಿಯಮಗಳಿವೆ, ಸದ್ಯ ಬಾಕಿ ಇರುವ ಲ್ಯಾಪ್ ಟಾಪ್ ವಿತರಣೆ ಬಗ್ಗೆ ಕೈಗೊಂಡಿರುವ ಕ್ರಮಗಳ ಕುರಿತು ಸಮಗ್ರ ವಿವರಣೆ ನೀಡಬೇಕು" ಎಂದು ಸರಕಾರಕ್ಕೆ ನಿರ್ದೇಶನ ನೀಡಿ ವಿಚಾರಣೆಯನ್ನು ಜ.8ಕ್ಕೆ ಮುಂದೂಡಿತು.

"ದೃಷ್ಟಿಚೇತನ ವಿದ್ಯಾರ್ಥಿಗಳ ಕಲಿಕೆಗೆ ಅನುಕೂಲವಾಗಲು 2014ರ ಜು. 2ರಂದು ಉಚಿತ ಟಾಕಿಂಗ್ ಯೋಜನೆ ಜಾರಿಗೆ ತರಲಾಗಿತ್ತು. 2018-19 ಮತ್ತು 2019-20ನೇ ಶೈಕ್ಷಣಿಕ ವರ್ಷದಲ್ಲಿ ಲ್ಯಾಪ್‌ಟಾಪ್ ನೀಡಿಲ್ಲ. 2014-15ರಲ್ಲಿ 4 ಕೋಟಿ ರೂ. ಒದಗಿಸಲಾಗಿತ್ತು. 2015-16ರಲ್ಲಿ 3.50 ಕೋಟಿ ರೂ.ಗೆ ಇಳಿಸಲಾಯಿತು. 2019-20ರಲ್ಲಿ ಕೇವಲ 2.41 ಕೋಟಿ ರೂ. ಅನುದಾನ ನೀಡಲಾಗಿದೆ" ಎಂದು ಅರ್ಜಿದಾರರು ತಿಳಿಸಿದ್ದಾರೆ.